**All India Radio: Bangalore**
**National Bulletin In Kannada**
**27.03.2026  19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.03.2026  19.35 hrs**

**<>><><*><><<>**

ಮುಖ್ಯಾಂಶಗಳು

೧. ಪಶ್ಚಿಮ ಏಷ್ಯಾದ ಸಂಘರ್ಷ; ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ನರೇಂದ್ರ ಮೋದಿ ಸಮಾಲೋಚನೆ

೨. ಪಶ್ಚಿಮ ಏಷ್ಯಾ ಬಿಕ್ಕಟ್ಟು; ಇಂಧನ ಭದ್ರತೆ ಮತ್ತು ಭಾರತೀಯರ ಸುರಕ್ಷತೆಗೆ ಕೇಂದ್ರ ಸರ್ಕಾರ ಆದ್ಯತೆ

೩. ೨.೩೮ ಲಕ್ಷ ಕೋಟಿ ರೂಪಾಯಿ ಮೊತ್ತದ ಶಸ್ತ್ರಾಸ್ತ್ರ ಖರೀದಿಗೆ ರಕ್ಷಣಾ ಸ್ವಾಧೀನ ಮಂಡಳಿ ಅನುಮೋದನೆ

೪. ಅಯೋಧ್ಯೆಯಲ್ಲಿ ಇಂದು ಅತ್ಯಂತ ಸಂಭ್ರಮದಿಂದ ರಾಮನವಮಿ ಆಚರಣೆ; ಸೂರ್ಯ ತಿಲಕ ದರ್ಶನ ಪಡೆದ ಲಕ್ಷಾಂತರ ಭಕ್ತಾದಿಗಳು

೫. ಹಾಕಿ ಇಂಡಿಯಾ ವಾರ್ಷಿಕ ಪ್ರಶಸ್ತಿ; ಜಾಫರ್ ಇಕ್ಬಾಲ್ ಗೆ 'ಮೇಜರ್ ಧ್ಯಾನ್ ಚಂದ್ ಜೀವಮಾನ ಸಾಧನೆಯ ಗೌರವ

**<>><><*><><<>**

ಪಶ್ಚಿಮ ಏಷ್ಯಾದ ಸಂಘರ್ಷದ ಕುರಿತು ರಾಜ್ಯಗಳ ಸಿದ್ಧತೆ ಮತ್ತು ಯೋಜನೆಗಳನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಾಲೋಚನೆ ನಡೆಸುತ್ತಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ಸಂಘಟನಾತ್ಮಕವಾಗಿ ನಿಭಾಯಿಸಲು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಗಳು ಹಾಗೂ ಕಾರ್ಯಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಗಳಿವೆ. ಕೇಂದ್ರ ಸರ್ಕಾರ ಈಗಾಗಲೇ ಕೈಗೊಂಡಿರುವ ಉಪಕ್ರಮಗಳು ಹಾಗೂ ರಾಜತಾಂತ್ರಿಕ ಪ್ರಯತ್ನಗಳ ಬಗ್ಗೆ ರಾಜ್ಯಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಪೆಟ್ರೋಲಿಯಂ ಹಾಗೂ ಅಡುಗೆ ಅನಿಲ ಪೂರೈಕೆ ವ್ಯವಸ್ಥೆಯನ್ನು ನಿಭಾಯಿಸಲು ಪ್ರಧಾನಿ ಅವರು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡುವ ಸಾಧ್ಯತೆ ಇದೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿನ ಅಸ್ಥಿರತೆಯ ಹಿನ್ನೆಲೆಯಲ್ಲಿ ದೇಶದ ಇಂಧನ ಭದ್ರತೆಯನ್ನು ಖಾತರಿಪಡಿಸಲು ಮತ್ತು ಸಾಮಾನ್ಯ ಗ್ರಾಹಕರ ಹಿತರಕ್ಷಣೆಗಾಗಿ ಕೇಂದ್ರ ಸರ್ಕಾರವು ಡೀಸೆಲ್ ಹಾಗೂ ವಿಮಾನ ಇಂಧನದ

ಮೇಲೆ ರಫ್ತು ಸುಂಕವನ್ನು ವಿಧಿಸಿದೆ. ಪಶ್ಚಿಮ ಏಷ್ಯಾದ ವಿದ್ಯಮಾನಗಳ ಕುರಿತು ನಡೆದ ಅಂತರ-ಸಚಿವಾಲಯಗಳ ಜಂಟಿ ಸುದ್ದಿಗೋಷ್ಠಿಯಲ್ಲಿ ಈ ಮಾಹಿತಿ ನೀಡಿದ ಕೇಂದ್ರ ಪರೋಕ್ಷ ತೆರಿಗೆಗಳು ಮತ್ತು ಕಸ್ಟಮ್ಸ್ ಮಂಡಳಿಯ ಅಧ್ಯಕ್ಷ ವಿವೇಕ್ ಚತುರ್ವೇದಿ, ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆ ಏರಿಕೆಯಾಗುತ್ತಿರುವ ಸಂದರ್ಭದಲ್ಲಿ ದೇಶೀಯವಾಗಿ ಇಂಧನ ಲಭ್ಯತೆಯನ್ನು ಕಾಯ್ದುಕೊಳ್ಳುವುದು ಈ ಕ್ರಮದ ಮುಖ್ಯ ಉದ್ದೇಶ ಎಂದು ತಿಳಿಸಿದರು. ಪೆಟ್ರೋಲಿಯಂ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ಭಾರತವು ಮುಂದಿನ ಎರಡು ತಿಂಗಳಿಗೆ ಸಾಕಾಗುವಷ್ಟು ಕಚ್ಚಾ ತೈಲ ಸಂಗ್ರಹವನ್ನು ಹೊಂದಿದೆ ಹಾಗೂ ಎಲ್‌ಪಿಜಿ ಮತ್ತು ಪಿಎನ್‌ಜಿ ಲಭ್ಯತೆಯು ಉತ್ತಮವಾಗಿದೆ ಎಂದು ಭರವಸೆ ನೀಡಿದರು. ಇದೇ ವೇಳೆ, ಕಳೆದ ೨೪ ಗಂಟೆಗಳಲ್ಲಿ ಕೊಲ್ಲಿ ರಾಷ್ಟ್ರಗಳಿಂದ ೨೫ ಭಾರತೀಯ ಪ್ರಜೆಗಳನ್ನು ಸುರಕ್ಷಿತವಾಗಿ ಸ್ವದೇಶಕ್ಕೆ ಕರೆತರಲಾಗಿದ್ದು, ಆ ಭಾಗದಲ್ಲಿರುವ ಎಲ್ಲಾ ಭಾರತೀಯ ಹಡಗುಗಳು ಮತ್ತು ನಾವಿಕರು ಸುರಕ್ಷಿತವಾಗಿದ್ದಾರೆ ಎಂದು ಅಧಿಕಾರಿಗಳು ಖಚಿತಪಡಿಸಿದ್ದಾರೆ.

<>><><*><><<>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಜಿ-೭ ವಿದೇಶಾಂಗ ಸಚಿವರ ಸಭೆಯ ಹಿನ್ನೆಲೆಯಲ್ಲಿ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೋ ಅವರೊಂದಿಗೆ ಇಂದು ಮಹತ್ವದ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಅವರೊಂದಿಗಿನ ಸಂವಾದ ಅತ್ಯಂತ ಉಪಯುಕ್ತವಾಗಿತ್ತು. ಉಭಯ ನಾಯಕರು ಜಾಗತಿಕ ಭದ್ರತಾ ಕಾಳಜಿ, ರಷ್ಯಾ-ಉಕ್ರೇನ್ ಸಂಘರ್ಷ ಮತ್ತು ಪಶ್ಚಿಮ ಏಷ್ಯಾ ಪ್ರಸ್ತುತ ಪರಿಸ್ಥಿತಿಯ ಕುರಿತು ಸುದೀರ್ಘ ಚರ್ಚೆ ನಡೆಸಿರುವುದಾಗಿ ತಿಳಿಸಿದ್ದಾರೆ. ಇದಕ್ಕೂ ಮುನ್ನ ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಮಾತನಾಡಿದ ಡಾ.ಎಸ್.ಜೈಶಂಕರ್, ಜಾಗತಿಕ ಆರ್ಥಿಕ ಭದ್ರತೆಗಾಗಿ ಸಮುದ್ರಯಾನದ ಸ್ವಾತಂತ್ರ್ಯದ ಅಗತ್ಯವನ್ನು ಒತ್ತಿ ಹೇಳಿದರು.

<>><><*><><<>

ದೇಶದ ರಕ್ಷಣಾ ಸನ್ನದ್ಧತೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನೇತೃತ್ವದ ರಕ್ಷಣಾ ಸ್ವಾದೀನ ಮಂಡಳಿ ಸುಮಾರು ೨.೩೮ ಲಕ್ಷ ಕೋಟಿ ರೂಪಾಯಿ ಮೌಲ್ಯದ ಮಿಲಿಟರಿ ಶಸ್ತ್ರಾಸ್ತ್ರ ಮತ್ತು ಸಲಕರಣೆಗಳ ಖರೀದಿಗೆ ಹಸಿರು ನಿಶಾನೆ ತೋರಿದೆ. ಭೂಸೇನೆಗಾಗಿ ಧನುಷ್ ಗನ್ ವ್ಯವಸ್ಥೆ, ವಾಯು ರಕ್ಷಣಾ ಟ್ರ್ಯಾಕ್ಡ್ ವ್ಯವಸ್ಥೆ ಮತ್ತು ಅತ್ಯಾಧುನಿಕ ಸಂವಹನ ವ್ಯವಸ್ಥೆಗಳನ್ನು ಖರೀದಿಸಲು ಅನುಮೋದನೆ ನೀಡಲಾಗಿದೆ. ವಾಯುಸೇನೆಗೆ ಮಧ್ಯಮ ಶ್ರೇಣಿಯ ಸಾರಿಗೆ ವಿಮಾನಗಳು-ಎಂಟಿಎ, ಎಸ್೪೦೦ ದೀರ್ಘ ಶ್ರೇಣಿಯ ಕ್ಷಿಪಣಿ ವ್ಯವಸ್ಥೆ ಮತ್ತು ರಿಮೋಟ್ ಚಾಲಿತ ಸ್ಟ್ರೈಕ್ ಏರ್‌ಕ್ರಾಫ್ಟ್‌ಗಳ ಸೇರ್ಪಡೆಗೆ ಒತ್ತು ನೀಡಲಾಗಿದೆ. ಕರಾವಳಿ ಕಾವಲು ಪಡೆಗಾಗಿ ಗಸ್ತು ಮತ್ತು ರಕ್ಷಣಾ ಕಾರ್ಯಾಚರಣೆಗಳಿಗೆ ಸಹಕಾರಿಯಾಗುವ ಹೈ-ಸ್ಪೀಡ್ ಏರ್ ಕುಶನ್ ವಾಹನಗಳನ್ನು ಒದಗಿಸಲಾಗುವುದು. ೨೦೨೫-೨೬ರ ಹಣಕಾಸು ವರ್ಷದಲ್ಲಿ ಒಟ್ಟು ೬.೭೩ ಲಕ್ಷ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇದು ದೇಶದ ರಕ್ಷಣಾ ಇತಿಹಾಸದಲ್ಲೇ ಅತ್ಯಂತ ಹೆಚ್ಚಿನ ಮೊತ್ತದ ಅನುಮೋದನೆಯಾಗಿದೆ. ಈ ಕ್ರಮವು 'ಆತ್ಮನಿರ್ಭರ ಭಾರತ'ದ ಸಂಕಲ್ಪದೊಂದಿಗೆ ರಕ್ಷಣಾ ವಲಯದಲ್ಲಿ ಸ್ವದೇಶಿ ತಂತ್ರಜ್ಞಾನದ ಬಳಕೆಗೆ ಹೆಚ್ಚಿನ ವೇಗ ನೀಡಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><*><><>

ಭಾರತೀಯ ರಕ್ಷಣಾ ಸಚಿವಾಲಯವು ದೇಶದ ವಾಯು ರಕ್ಷಣೆ ಮತ್ತು ನೌಕಾಪಡೆಯ ಕಣ್ಗಾವಲು ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇಂದು ಒಟ್ಟು ೮೫೪೮ ಕೋಟಿ ರೂಪಾಯಿ ಮೌಲ್ಯದ ಎರಡು ಪ್ರಮುಖ ಒಪ್ಪಂದಗಳಿಗೆ ಸಹಿ ಹಾಕಿದೆ.  ಇದರಲ್ಲಿ ಭಾರತೀಯ ಭೂಸೇನೆಗಾಗಿ 'ತುಂಗುಸ್ಕಾ' ವಾಯು ರಕ್ಷಣಾ ಕ್ಷಿಪಣಿ ವ್ಯವಸ್ಥೆಯ ಖರೀದಿ ಮತ್ತು ನೌಕಾಪಡೆಯ ಪಿ೮ಐ ದೀರ್ಘ ಶ್ರೇಣಿಯ ಕಡಲ ವಿಚಕ್ಷಣಾ ವಿಮಾನಗಳ ತಪಾಸಣೆ ಹಾಗೂ ನಿರ್ವಹಣಾ ಯೋಜನೆಗಳು ಸೇರಿವೆ. ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ಈ ಐತಿಹಾಸಿಕ ಒಪ್ಪಂದಗಳು ನಡೆದವು.

<><><*><><>

ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಇಂದು ರಾಮನವಮಿಯನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಶ್ರೀರಾಮ ಮಂದಿರದಲ್ಲಿಂದು ಮಧ್ಯಾಹ್ನ ಸರಿಯಾಗಿ ೧೨ ಗಂಟೆಗೆ ಸೂರ್ಯನ ಕಿರಣಗಳು ಬಾಲರಾಮನ ಹಣೆಯ ಮೇಲೆ ಸುಮಾರು ೪ ನಿಮಿಷಗಳ ಕಾಲ ನೇರವಾಗಿ ಸೂರ್ಯ ತಿಲಕವಾಗಿ ಬಿದ್ದ ದಿವ್ಯ ದೃಶ್ಯಕ್ಕೆ ಲಕ್ಷಾಂತರ ಭಕ್ತರು ಸಾಕ್ಷಿಯಾದರು. ಈ ಪವಿತ್ರ ಸಂದರ್ಭದಲ್ಲಿ ಬಾಲರಾಮನಿಗೆ ೫೬ ಬಗೆಯ ನೈವೇದ್ಯಗಳನ್ನು ಅರ್ಪಿಸಲಾಯಿತು. ದರ್ಶನಕ್ಕಾಗಿ ಅಯೋಧ್ಯೆಯಲ್ಲಿ ಸುಮಾರು ೧೦ ಲಕ್ಷಕ್ಕೂ ಅಧಿಕ ಭಕ್ತರು ನೆರೆದು, ಸರಯೂ ನದಿಯಲ್ಲಿ ಪುಣ್ಯ ಸ್ನಾನಗೈದು ಶ್ರೀರಾಮ ಕೃಪೆಗೆ ಪಾತ್ರರಾದರು. ಭಕ್ತರ ದಟ್ಟಣೆಯನ್ನು ಪರಿಗಣಿಸಿ, ತಡರಾತ್ರಿಯವರೆಗೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

<><><*><><>

ಪ್ರಧಾನಿ ನರೇಂದ್ರ ಮೋದಿ ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರಲ್ಲಿ ನಡೆದ ಭವ್ಯ ಸೂರ್ಯ ತಿಲಕ ದರ್ಶನ ಮತ್ತು ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಸಂಸತ್ ಭವನದ ತಮ್ಮ ಕಚೇರಿಯಿಂದಲೇ ಟಿವಿ ಮೂಲಕ ನೇರ ಪ್ರಸಾರವನ್ನು ವೀಕ್ಷಿಸಿ, ಪ್ರಾರ್ಥನೆ ಸಲ್ಲಿಸಿದರು.  ರಾಮನವಮಿಯ ಪವಿತ್ರ ಸಂದರ್ಭದಲ್ಲಿ ದೇಶದ ಸಮಸ್ತ ಜನತೆಗೆ ಶುಭಕೋರಿರುವ ಪ್ರಧಾನಿ, ಮರ್ಯಾದಾ ಪುರುಷೋತ್ತಮ ಶ್ರೀರಾಮನ ತ್ಯಾಗ, ತಪಸ್ಸು ಮತ್ತು ಸಂಯಮದ ಜೀವನ ಪ್ರತಿಯೊಂದು ಸವಾಲನ್ನು ಎದುರಿಸಲು ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಶ್ರೀರಾಮನ ಕೃಪಾಕಟಾಕ್ಷದಿಂದ ಎಲ್ಲರ ಕಲ್ಯಾಣ ಹಾಗೂ ದೇಶಕ್ಕೆ ವಿಕಸಿತ ಮತ್ತು ಆತ್ಮನಿರ್ಭರ ಭಾರತದ ಸಂಕಲ್ಪವನ್ನು ಈಡೇರಿಸುವ ಶಕ್ತಿ ದೊರಕಲಿ ಎಂದು ಪ್ರಾರ್ಥಿಸಿದ್ದಾರೆ.

<><><*><><>

ಕಂಪನಿಗಳು ಮತ್ತು ವ್ಯಕ್ತಿಗಳ ನಡುವಿನ ದಿವಾಳಿತನ ಪ್ರಕ್ರಿಯೆಯಲ್ಲಿನ ವಿಳಂಬ ಹಾಗೂ ವ್ಯಾಖ್ಯಾನದ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಮಂಡಿಸಲಾಗಿರುವ ಇನ್ಸಾಲ್ವೆನ್ಸಿ ಮತ್ತು ದಿವಾಳಿತನ ಸಂಹಿತೆ ತಿದ್ದುಪಡಿ ವಿಧೇಯಕ-೨೦೨೫'ರ ಕುರಿತಾದ ಚರ್ಚೆಯು ಇಂದು ಲೋಕಸಭೆಯಲ್ಲಿ ಮುಂದುವರಿಯಿತು. ೨೦೧೬ರ ಮೂಲ ಸಂಹಿತೆಗೆ ಮತ್ತಷ್ಟು ಸುಧಾರಣೆಗಳನ್ನು ತರುವುದು ಈ ವಿಧೇಯಕದ ಪ್ರಮುಖ ಉದ್ದೇಶವಾಗಿದೆ. ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಬಿಜೆಪಿ ಸಂಸದ ಜಗದಂಬಿಕಾ ಪಾಲ್ ಅವರು, ೨೦೧೪ರಲ್ಲಿ ವಿಶ್ವದ ೧೧ನೇ ಅತಿದೊಡ್ಡ ಆರ್ಥಿಕತೆಯಾಗಿದ್ದ ಭಾರತವು

ಇಂದು ೪ನೇ ಸ್ಥಾನಕ್ಕೆ ಜಿಗಿದಿದೆ ಎಂದು ಪ್ರತಿಪಾದಿಸಿದರು. ಕಳೆದ ಹತ್ತು ವರ್ಷಗಳಲ್ಲಿ ಹಣಕಾಸು ಶಿಸ್ತು ಮತ್ತು ಒಳಗೊಳ್ಳುವಿಕೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದರು. ಕಾಂಗ್ರೆಸ್ ಸಂಸದ ಗೋವಾಲ್ ಪದವಿ ಮಾತನಾಡಿ, ಈ ಸಂಹಿತೆಯನ್ನು ಮತ್ತಷ್ಟು ಪಾರದರ್ಶಕ ಮಾಡುವ ಅಗತ್ಯವಿದ್ದು, ಈ ವಿಧೇಯಕವನ್ನು ಹೆಚ್ಚಿನ ಪರಿಶೀಲನೆಗಾಗಿ ಆಯ್ಕೆ ಸಮಿತಿಗೆ ಕಳುಹಿಸುವಂತೆ ಅವರು ಒತ್ತಾಯಿಸಿದರು.

<>><><*><><<>

ಲೋಕಸಭೆಯಲ್ಲಿಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ 'ಜನ್ ವಿಶ್ವಾಸ್' ನಿಬಂಧನೆಗಳ ತಿದ್ದುಪಡಿ ವಿಧೇಯಕ-೨೦೨೬ ಅನ್ನು ಮಂಡಿಸಿದರು. ದೇಶದಲ್ಲಿ ವ್ಯವಹಾರ ನಡೆಸುವ ಪ್ರಕ್ರಿಯೆಯನ್ನು ಸುಗಮಗೊಳಿಸಲು ಹಾಗೂ ಆಡಳಿತದಲ್ಲಿ ಜನರ ವಿಶ್ವಾಸವನ್ನು ವೃದ್ಧಿಸುವ ನಿಟ್ಟಿನಲ್ಲಿ ಈ ಕಾನೂನು ವಿವಿಧ ಕಾಯ್ದೆಗಳ ಅಡಿಯಲ್ಲಿರುವ ಸಣ್ಣಪುಟ್ಟ ಅಪರಾಧಗಳನ್ನು ಅಪರಾಧ ಮುಕ್ತಗೊಳಿಸುವ ಮತ್ತು ದಂಡದ ಪ್ರಮಾಣವನ್ನು ತರ್ಕಬದ್ಧಗೊಳಿಸುವ ಗುರಿಯನ್ನು ಹೊಂದಿದೆ.

<>><><*><><<>

ಸಂಕಷ್ಟದಲ್ಲಿರುವ ಮಹಿಳೆಯರಿಗೆ ನೆರವು ನೀಡಲು ದೇಶಾದ್ಯಂತ ಒಟ್ಟು ೯೨೬ ಒನ್ ಸ್ಟಾಪ್ ಕೇಂದ್ರ - ಒಎಸ್‌ಸಿಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವ ಸಾವಿತ್ರಿ ಠಾಕೂರ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಈ ಕೇಂದ್ರಗಳ ಮೂಲಕ ಇದುವರೆಗೆ ೧೩ ಲಕ್ಷಕ್ಕೂ ಹೆಚ್ಚು ಮಹಿಳೆಯರಿಗೆ ಅಗತ್ಯ ಸಹಾಯ ಒದಗಿಸಲಾಗಿದೆ. ಮಿಷನ್ ಶಕ್ತಿ ಯೋಜನೆಯಡಿ ಪೊಲೀಸ್ ಠಾಣೆಗಳಲ್ಲಿ ೧೫ ಸಾವಿರಕ್ಕೂ ಹೆಚ್ಚು ಮಹಿಳಾ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ೧೪ ಸಾವಿರಕ್ಕೂ ಹೆಚ್ಚು ಕೇಂದ್ರಗಳ ನೇತೃತ್ವವನ್ನು ಮಹಿಳಾ ಪೊಲೀಸ್ ಅಧಿಕಾರಿಗಳೇ ವಹಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

<>><><*><><<>

ನವದೆಹಲಿಯಲ್ಲಿ ಇಂದು ನಡೆದ ಹಾಕಿ ಇಂಡಿಯಾದ ೮ನೇ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅಂತಾರಾಷ್ಟ್ರೀಯ ತಾರೆಗಳಾದ ನವನೀತ್ ಕೌರ್ ಮತ್ತು ಹಾರ್ದಿಕ್ ಸಿಂಗ್ ಅವರು 'ವರ್ಷದ ಶ್ರೇಷ್ಠ ಆಟಗಾರ' ಪ್ರಶಸ್ತಿಗೆ ಭಾಜನರಾಗಿದ್ದಾರೆ. ೧೯೮೦ರ ಒಲಿಂಪಿಕ್ ಚಿನ್ನದ ಪದಕ ವಿಜೇತ ತಂಡದ ಸದಸ್ಯ ಹಾಗೂ ಮಾಜಿ ನಾಯಕ ಜಾಫರ್ ಇಕ್ಬಾಲ್ ಅವರಿಗೆ ಪ್ರತಿಷ್ಠಿತ 'ಮೇಜರ್ ಧ್ಯಾನ್ ಚಂದ್ ಜೀವಮಾನ ಸಾಧನೆ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕೇಂದ್ರ ಸಚಿವರಾದ ಡಾ.ಮನ್ಸುಖ್ ಮಾಂಡವೀಯ ಮತ್ತು ರಕ್ಷಾ ಖಡ್ಸೆ ಅವರ ಸಮ್ಮುಖದಲ್ಲಿ ನಡೆದ ಈ ಸಮಾರಂಭದಲ್ಲಿ ಹಿರಿಯ ಹಾಕಿ ದಿಗ್ಗಜರು ಹಾಗೂ ಕ್ರೀಡಾ ಪಟುಗಳು ಪಾಲ್ಗೊಂಡಿದ್ದರು.  ಪುರುಷರ ಮತ್ತು ಮಹಿಳೆಯರ ವಿಭಾಗದ ವರ್ಷದ ಶ್ರೇಷ್ಠ ಆಟಗಾರ ಪ್ರಶಸ್ತಿಯು ತಲಾ ೨೦ ಲಕ್ಷ ರೂಪಾಯಿ ನಗದನ್ನು ಒಳಗೊಂಡಿದ್ದರೆ, ಜೀವಮಾನ ಸಾಧನೆ ಪ್ರಶಸ್ತಿಯು ೨೫ ಲಕ್ಷ ರೂಪಾಯಿ ನಗದನ್ನು ಒಳಗೊಂಡಿದೆ. ಇದೇ ವೇಳೆ ೨೦೨೫ರ ಏಷ್ಯಾ ಕಪ್‌ನಲ್ಲಿ ಚಿನ್ನ ಗೆದ್ದ ಪುರುಷರ ತಂಡ ಹಾಗೂ ಜೂನಿಯರ್ ವಿಶ್ವಕಪ್‌ನಲ್ಲಿ ಕಂಚು ಗೆದ್ದ ತಂಡದ ಆಟಗಾರರಿಗೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.

**<>><><** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **><><<>**

**<>><><**ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **><><<>**